# Government is also promoting setting up of an aerospace university

| Pub Date: | 02 Dec 2015 | Publication: | Hosadigantha Daily | Edition: | Bangalore |
|---|---|---|---|---|---|
| Journalist: | Bureau | Language: | Kannada | Page No.: | 4 |
| CCM: | 80.96 | MAV: | 35623.01 | Circulation | 42000 |



### ಎರಡು ದಿನಗಳ ವೈಮಾನಿಕ, ರಕ್ಷಣಾ ಕ್ಷೇತ್ರದ ವಸ್ತು ಪ್ರದರ್ಶನ ಮೇಳಕ್ಕೆ ಚಾಲನೆ

# ವೈಮಾನಿಕ ಕ್ಷೇತ್ರಕ್ಕೆ ಪೂರಕವಾಗಿ ವಿವಿ ಸ್ಥಾಪನೆಗೆ ಚಿಂತನೆ

**ಬೆಂಗಳೂರು:** ವೈಮಾನಿಕ ಕ್ಷೇತ್ರದಲ್ಲಿ ಮೂಲಭೂತ ಸೌಕರ್ಯ ವೃದ್ಧಿಗೊಳಿಸಲು ಪೂರಕವಾಗುವಂತೆ ವಿಶ್ವವಿದ್ಯಾಲಯ ಸ್ಥಾಪನೆಗೆ ಚಿಂತನೆ ನಡೆಸಲಾಗುವುದು ಎಂದು ಮೂಲಭೂತ ಸೌಕರ್ಯ ಸಚಿವ ಆರ್.ರೋಷನ್ ಬೇಗ್ ತಿಳಿಸಿದರು.

ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಮತ್ತು ನಿರ್ಮಾಣ, ದುರಸ್ತಿ ಹಾಗೂ ನಿರ್ವಹಣಾ ಸಂಘಟನೆಯ ವತಿಯಿಂದ ಆಯೋಜಿಸಿದ್ದ ಎರಡು ದಿನಗಳ ವೈಮಾನಿಕ ಮತ್ತು ರಕ್ಷಣಾ ಕ್ಷೇತ್ರದ ವಸ್ತುಗಳ ಪ್ರದರ್ಶನ ಮೇಳವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ರಾಜ್ಯದಲ್ಲಿ ವೈಮಾನಿಕ ಹಾಗೂ ರಕ್ಷಣಾ ಕ್ಷೇತ್ರಕ್ಕೆ ಗಣನೀಯ ಪ್ರಮಾಣದಲ್ಲಿ ಕೊಡುಗೆ ನೀಡಿದ ಎಚ್ಎಎಲ್, ಬಿಇಎಲ್ ಹಾಗೂ ಇಸ್ರೋದಂತಹ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ದೇಶದಲ್ಲಿಯೆ ಪ್ರಥಮ ಬಾರಿಗೆ ರಾಜ್ಯದಲ್ಲಿ ವೈಮಾನಿಕ ನೀತಿ ಜಾರಿಗೆ ತಂದಿರುವ ಹೆಗ್ಗಳಿಕೆಗೆ ಪಾತ್ರವಾಗಿದೆ.

ಈ ಮೂಲಕ ವಾಯುಯಾನ ಕ್ಷೇತ್ರಕ್ಕೆ ಉತ್ತಮ ಪ್ರೋತ್ಸಾಹ ನೀಡುತ್ತಿದೆ. ಕೈಗಾರಿಕೆಗಳಿಗಾಗಿ ವಿಶೇಷ ಆರ್ಥಿಕ ವಲಯ ನಿರ್ಮಾಣ ಮಾಡಿದೆ. ದೇವನಹಳ್ಳಿಯ ಸಮೀಪ 1ಸಾವಿರ ಎಕರೆ ಭೂಮಿ ಕಾಯ್ದಿರಿಸಿ, ವೈಮಾನಿಕ ಕ್ಷೇತ್ರದ ಪ್ರಗತಿಗೆ ಸಹಕಾರ ನೀಡಲಾಗಿದೆ. ಅಲ್ಲದೆ ಉತ್ಪಾದನೆ, ದುರಸ್ತಿ ಹಾಗೂ ನಿರ್ವಹಣೆಗೆ ಆದ್ಯತೆ ಕಲ್ಪಿಸಲಾಗಿದೆ ಎಂದರು.

**ವೈಮಾನಿಕ ನೀತಿಯ ಕರಡು ರಚನೆ**

ಮೂಲಭೂತ ಸೌಕರ್ಯ ಇಲಾಖೆ ಪ್ರಧಾನ ಕಾರ್ಯದರ್ಶಿ ವಂದಿತಾ ಶರ್ಮಾ ಮಾತನಾಡಿ, ದೇಶದಲ್ಲಿ ವೈಮಾನಿಕ ಕ್ಷೇತ್ರವು ಅತ್ಯಂತ ವೇಗವಾಗಿ ಬೆಳವಣಿಗೆಯಾಗುತ್ತಿದ್ದು, ಕರ್ನಾಟಕವು ಉತ್ಕೃಷ್ಟ ಸ್ಥಿತಿ ಕಾಯ್ದುಕೊಂಡಿದೆ. ಬೆಂಗಳೂರು ವಿಮಾನ ನಿಲ್ದಾಣದಲ್ಲಿ ಪ್ರಯಾಣಿಕರ ಅಗತ್ಯಕ್ಕೆ ತಕ್ಕಂತೆ ವಿವಿಧ ಸೌಲಭ್ಯ ಕಲ್ಪಿಸಲಾಗಿದ್ದು, ದ್ವಿತೀಯ ಹಂತದ ರನ್‌ವೇ ಕಾರ್ಯ ಪ್ರಾರಂಭವಾಗಿದೆ. ಮಾತ್ರವಲ್ಲದೆ ಶೀಘ್ರದಲ್ಲಿ ಟರ್ಮಿನಲ್ ವೇ ಪ್ರಾರಂಭಿಸಲಾಗುವುದು. ದೇಶದಲ್ಲಿ ಈಗಾಗಲೆ ಕರಡು ವೈಮಾನಿಕ ನೀತಿ ರಚನೆಯಾಗಿದ್ದು, ಸಮಸ್ಯೆಗಳಿರುವುದನ್ನು ಸರ್ಕಾರದ ಗಮನಕ್ಕೆ ತರಬೇಕು. ರಾಜ್ಯ ಸರ್ಕಾರ ಸಾರ್ವಜನಿಕ, ಖಾಸಗಿ ಸಹಭಾಗಿತ್ವದಲ್ಲಿ ಕೈಗೊಂಡ ಕ್ರಮವು ಯಶಸ್ವಿಯಾಗುತ್ತಿದೆ ಎಂದರು.

ವೇದಿಕೆಯಲ್ಲಿ ಎಂಆರ್ಒ ಅಸೋಸಿಯೇಶನ್‌ನ ಸ್ಥಾಪಕ ಪ್ರಧಾನ ಕಾರ್ಯದರ್ಶಿ ಪುಲಕ್ ಸೇನ್, ಎಐಇಎಸ್ಎಲ್‌ನ ಆಶಿಷ್ ದಾಸಗುಪ್ತಾ ಮತ್ತಿತರರು ಉಪಸ್ಥಿತರಿದ್ದರು.




ಬೆಂಗಳೂರಿನಲ್ಲಿ ಆಯೋಜಿಸಿದ್ದ ಎರಡು ದಿನಗಳ ವೈಮಾನಿಕ ಮತ್ತು ರಕ್ಷಣಾ ಕ್ಷೇತ್ರದ ವಸ್ತುಗಳ ಪ್ರದರ್ಶನ ಮೇಳವನ್ನು ಸಚಿವ ಆರ್.ರೋಷನ್ ಬೇಗ್ ಉದ್ಘಾಟಿಸಿದರು.

**ಎಚ್ಎಎಲ್ ಆದಾಯ ಹೆಚ್ಚಳ**

ಎಚ್ಎಎಲ್‌ನ ಸಿಇಒ ಕಾವೇರಿ ರಂಗನಾಥನ್ ಮಾತನಾಡಿ, ಅತ್ಯಂತ ವೇಗವಾಗಿ ಬೆಳವಣಿಗೆಯಾಗುತ್ತಿರುವ ವೈಮಾನಿಕ ಕ್ಷೇತ್ರದಿಂದ ದೇಶದ ಆರ್ಥಿಕತೆ ಅಭಿವೃದ್ಧಿಯಾಗುತ್ತಿದೆ. 60 ಮಿಲಿಯನ್ ದೇಶೀಯ ಗ್ರಾಹಕರು ಹಾಗೂ 45 ಮಿಲಿಯನ್ ವಿದೇಶಿ ಪ್ರವಾಸಿಗರು ಆಗಮಿಸಿರುವುದು ವಿಶೇಷವಾಗಿದೆ. ಏರ್‌ಕಾರ್ಗೋದಲ್ಲಿಯೂ ಗಣನೀಯ ಪ್ರಮಾಣದಲ್ಲಿ ಏರಿಕೆಯಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಎಚ್ಎಎಲ್‌ನ ಆದಾಯವು ಶೇ.20ರಷ್ಟು ಹೆಚ್ಚಾಗಿದೆ ಎಂದು ತಿಳಿಸಿದರು.